# ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

*E-mail:Commissioner.pue@gmail.com. * Ph. No.23361857, 23361858* Fax-23361852*

ಸಂಖ್ಯೆ:ಪಿಯು/12/ಸಿಬ್ಬಂದಿ/ಸಿಆರ್-2/ಎನ್‌ಓಸಿ/2016-17 ದಿನಾಂಕ: 14-10-2016.

## ಜ್ಞಾಪನ

**ವಿಷಯ:**- ಸಹ ಪ್ರಾಧ್ಯಾಪಕ/ಸಹಾಯಕ ಉಪನ್ಯಾಸಕ ಹುದ್ದೆ/ ಇತರೆ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವ ಬಗ್ಗೆ.

**ಉಲ್ಲೇಖ:**-ಜಿಲ್ಲಾ ಉಪನಿರ್ದೇಶಕರು, ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಹಾಗ್ಗೂ ಸಿಬ್ಬಂದಿ ವರ್ಗದವರ ಪತ್ರಗಳು

-*-

ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು, ಇವರು ಜಿಲ್ಲಾ ಉಪನಿರ್ದೇಶಕರ /ಪ್ರಾಂಶುಪಾಲರುಗಳ ಮುಖೇನ ಉಲ್ಲೇಖಿತ ಪತ್ರಗಳಲ್ಲಿ ಸಹ ಪ್ರಾಧ್ಯಾಪಕ ಹಾಗು ಅಧ್ಯಾಪಕ ಹುದ್ದೆಗಳಿಗೆ ಅನುಮತಿ ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಉಪನ್ಯಾಸಕರುಗಳ ಹೆಸರಿನ ಮುಂದೆ ತೋರಿಸಿರುವ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಷರತ್ತಿಗೊಳಪಟ್ಟು ಅನುಮತಿ ನೀಡಿದೆ:

| ಕ್ರ.ಸ | ಹೆಸರು ಮತ್ತು ಕಾಲೇಜು ವಿಳಾಸ<br>ಶ್ರೀಮತಿ/ಶ್ರೀ | ಅನುಮತಿ ಕೋರಲಾದ ಹುದ್ದೆ |
|---|---|---|
| 1 | **ನರಸಿಂಹರಾಜು ಕೆ.**<br>ಸಮಾಜಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಟಿ ಎನ್ ಕೋಟೆ,<br>ಚಳ್ಳಕೆರೆ ತಾ॥ ಚಿತ್ರದುರ್ಗ ಜಿಲ್ಲೆ, | ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬೆಂಗಳೂರು ಇವರು ಕರೆದಿರುವ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಅರ್ಜಿ ಸಲ್ಲಿಸಲು(PDO) |
| 2 | **ಮುನಿಯಪ್ಪ ಹೆಚ್ ಸಿ,**<br>ಸಮಾಜಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಸ್ವತಂತ್ರ ಪಧವಿ ಪೂರ್ವ ಕಾಲೇಜು,<br>ಹನುಮಂತನಗರ, ರಾಮನಗರ ಜಿಲ್ಲೆ. | ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬೆಂಗಳೂರು ಇವರು ಕರೆದಿರುಪ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಅರ್ಜಿ ಸಲ್ಲಿಸಲು(PDO) |
| 3 | **ಕಾಂತರಾಜು ಪಿ,**<br>ಗಣಿತಶಾಸ್ತ್ರ ಉಪನ್ಯಾಸಕರು<br>ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು, ಚಿತ್ರದುರ್ಗ,<br>ಚಿತ್ರದುರ್ಗ ಜಿಲ್ಲೆ. | ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬೆಂಗಳೂರು ಇವರು ಕರೆದಿರುವ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಅರ್ಜಿ ಸಲ್ಲಿಸಲು(PDO) |
| 4 | **ಸುರೇಶ್ ಚಂ ಗಬ್ಬೂರ,**<br>ಇತಿಹಾಸ ಉಪನ್ಯಾಸಕರು<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಸಾಸನೂರ,<br>ಬ ಬಾಗೇವಾಡಿ ತಾ॥, ವಿಜಯಪುರ ಜಿಲ್ಲೆ. | ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬೆಂಗಳೂರು ಇವರು ಕರೆದಿರುವ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಅರ್ಜಿ ಸಲ್ಲಿಸಲು(PDO) |

**ಷರತ್ತುಗಳು:**

1. ಸದರಿ ಉಪನ್ಯಾಸಕರು/ದ್ವಿದಸ, ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು. ಉಪನ್ಯಾಸಕರುಗಳು, ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
2. ಸದರಿ ಉಪನ್ಯಾಸಕರುಗಳು, ವಿದ್ಯಾರ್ಥಿಗಳ ಪಾಠ-ಪ್ರವಚನಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.
3. ಸದರಿ ಉಪನ್ಯಾಸಕರು/ದ್ವಿದಸ, ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿ ಬರುವಂತಿಲ್ಲ.
4. ಸದರಿ ಉಪನ್ಯಾಸಕರು/ದ್ವಿದಸ, ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ, ಈಗ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯತಕ್ಕದ್ದು.

ಜಂಟಿ ನಿರ್ದೇಶಕರು(ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಗಳು:**

1. ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರಿಗೆ.
2. ಸಹಾಯಕ ನಿರ್ದೇಶಕರು, ಇ-ಆಡಳಿತ, ಪಪೂಶಿಇ, ಬೆಂಗಳೂರು.
3. ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಗೆ ಹಾಗೂ ಉಪನ್ಯಾಸಕರು /ದ್ವಿದಸ ರವರಿಗೆ ಪ್ರಾಂಶುಪಾಲರ ಮುಖೇನ.
4. ಕಛೇರಿ ಪ್ರತಿ.